13-12-24

(22)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಬಲ್ಕೀಸ್ ಬಾನು ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ.**

**ವಿಷಯ:** ರಾಜ್ಯದಲ್ಲಿ ಅಡಿಕೆ ಕುರಿತು ಸಂಶೋಧನೆ ಮಾಡಲು ನುರಿತ ತಂಡವನ್ನು ರಚಿಸಿ ವೈಜ್ಞಾನಿಕ ವರದಿ ತಯಾರಿಸಿ ಸುಪ್ರೀಂ ಕೋರ್ಟ್‌ಗೆ ಸಲ್ಲಿಸುವ ಮೂಲಕ ಆಡಿಕೆಗೆ ಬಂದಿರುವ ಕೆಟ್ಟ ಹೆಸರು ತೆಗೆದು ಹಾಕಬೇಕು ಎಂದು ರೈತ ಸಂಘ ಸಾಮೂಹಿಕ ನಾಯಕತ್ವ ಶಾಖೆ ವತಿಯಿಂದ ಉಪವಿಭಾಗಾಧಿಕಾರಿ ಕಚೇರಿ ಮೂಲಕ ಪ್ರಧಾನ ಮಂತ್ರಿಗೆ ಮನವಿ ಸಲ್ಲಿಸಿದ್ದಾರೆ.

ತಲತಲಾಂತರದಿಂದ ರೈತರು ಅಡಿಕೆ ಬೆಳೆಯುತ್ತಿದ್ದು, ಎಲೆ, ಅಡಿಕೆ ಸುಣ್ಣ ಸೇವನೆ ಆರೋಗ್ಯ ವೃದ್ಧಿಸುತ್ತದೆ ಎಂಬುದು ಸಾಬೀತಾಗಿದೆ. ಎಲೆ ಅಡಿಕೆ ಸೇವಿಸಿ ಬಾಯಿ ಕ್ಯಾನ್ಸರ್ ಕಾಯಿಲೆ ಬಂದು ಸಾವಿಗೀಡಾದ ಉದಾಹರಣೆ ಇಲ್ಲ. ಇದೀಗ ವಿಶ್ವ ಆರೋಗ್ಯ ಸಂಸ್ಥೆ ಅಡಿಕೆ ಸೇವಿಸುವುದರಿಂದ ಬಾಯಿ ಕ್ಯಾನ್ಸರ್ ಬರುತ್ತದೆ ಎಂದು ವರದಿ ನೀಡಿದೆ. ಗುಟ್ಕಾ ಕಂಪೆನಿಗಳು ಹಣ ಮಾಡುವ ಉದ್ದೇಶದಿಂದ ಅಡಿಕೆ ಜೊತೆಗೆ ಹಾನಿಕಾರಕ ರಾಸಾಯನಿಕ ಬಳಕೆ ಮಾಡುತ್ತಿರುವುದರಿಂದ ಆಡಿಕೆ ಗುಣಮಟ್ಟ ಕೆಡುತ್ತಿದೆಯೇ ವಿನಃ ಅಡಿಕೆ ಸೇವನೆ ಹಾನಿಕಾರಕವಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಸುಪ್ರೀಂ ಕೋರ್ಟ್‌ನಲ್ಲಿ ಅಡಿಕೆ ಹಾನಿಕಾರಕ ಎಂಬ ವಿಷಯ ಕುರಿತು ವಾದ-ಪ್ರತಿವಾದ ನಡೆಯುತ್ತಿದೆ. ಇಂತಹ ಹೊತ್ತಿನಲ್ಲಿ ವಿಶ್ವ ಆರೋಗ್ಯ ಸಂಸ್ಥೆಯ ವರದಿ ರೈತರಿಗೆ ಮರಣ ಶಾಸನವಾಗಿ ಮಾರ್ಪಟ್ಟಿದೆ. ಈ ಹಿನ್ನೆಲೆಯಲ್ಲಿ ರಾಜ್ಯದ ಅಡಿಕೆ ಬೆಳೆಗಾರರ ಹಿತರಕ್ಷಣೆ ಮಾಡಲು ಕೇಂದ್ರ ಸರ್ಕಾರ ಮುಂದೆ ಬರಬೇಕು ಅಡಿಕೆ ಕುರಿತು ವೈಜ್ಞಾನಿಕ ಸಂಶೋಧನೆ ನಡೆಸಲು ತಂಡವನ್ನು ರಚಿಸಿ ಸುಪ್ರೀಂ ಕೋರ್ಟ್‌ಗೆ ಅಫಿಡೆಬಿಟ್ ಸಲ್ಲಿಸಬೇಕೆಂದು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ:** ಕರ್ನಾಟಕ ರಾಜ್ಯವು ಅಡಿಕೆ ಬೆಳೆಯನ್ನು 6.89 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು, ವಾರ್ಷಿಕ ಉತ್ಪನ್ನ 10.46 ಮೆಟ್ರಿಕ್ ಟನ್‌ಗಳು ಇರುತ್ತದೆ. ರಾಜ್ಯವು ಅಡಿಕೆ ಪ್ರದೇಶ & ಉತ್ಪಾದನೆಯಲ್ಲಿ ದೇಶದಲ್ಲಿ ಮೊದಲನೇ ಸ್ಥಾನದಲ್ಲಿರುತ್ತದೆ. ಅಡಿಕೆ ಉತ್ಪನ್ನವನ್ನು ಅನಾದಿಕಾಲದಿಂದಲೂ ಭಾರತ ದೇಶದ ಸಂಪ್ರದಾಯದಲ್ಲಿ ಎಲ್ಲಾ ಮಂಗಳ ಕಾರ್ಯಗಳಲ್ಲಿ ಬಳಸಲಾಗುತ್ತಿದೆ. ಹಾಗೂ ಅಡಿಕೆ ಔಷಧೀಯ ಗುಣಗಳ ಬಗ್ಗೆ ಪ್ರಾಚೀನ ಆಯುರ್ವೇದ ಗ್ರಂಥಗಳಲ್ಲೂ ಸಹಾ ಉಲ್ಲೇಖವಿರುತ್ತದೆ. ಹೀಗಿದ್ದರೂ ಸಹ ಅಡಿಕೆ ಉತ್ಪನ್ನವನ್ನು ತಂಬಾಕು ಮತ್ತು ಇತರೆ ಬಣ್ಣಗಳೊಂದಿಗೆ ಗುಟ್ಕ, ಮಸಾಲ

ಇತ್ಯಾದಿ ಉತ್ಪನ್ನಗಳೊಂದಿಗೆ ಮಾರಾಟ ಮಾಡುವುದರಿಂದ ಮೂಲತಃ ಅಡಿಕೆ ಉತ್ತಮ ಗುಣ ಹೊಂದಿದ್ದರೂ ಅಡಿಕೆಯನ್ನು ಕ್ಯಾನ್ಸರ್ ಕಾರಕವೆಂದು ಪ್ರಚಾರ ಪಡಿಸಲಾಗುತ್ತಿದೆ. ಇತ್ತೀಚೆಗೆ ವಿಶ್ವಸಂಸ್ಥೆ ವರದಿಯಲ್ಲಿಯೂ ಸಹ ಈ ಬಗ್ಗೆ ಉಲ್ಲೇಖವಾಗಿದೆ. ಇದರಿಂದ ರಾಜ್ಯದ ಅಡಿಕೆ ಬೆಳೆಗಾರರು ಕಂಗಾಲಾಗಿರುತ್ತಾರೆ. ಜೊತೆಗೆ ರಾಜ್ಯದಲ್ಲಿ ಬೆಳೆಯುವ ಉತ್ತಮ ಗುಣಮಟ್ಟದ ಅಡಿಕೆಯ ಜೊತೆ ಆಮದಾದ ಕಳಪೆ ಗುಣಮಟ್ಟದ ಅಡಿಕೆಯನ್ನು ಸೇರ್ಪಡಿಸಲಾಗುತ್ತಿದೆ. ಇದನ್ನು ತಡೆಯಲು ಅಡಿಕೆ ಆಮದು ನಿಯಂತ್ರಿಸುವಂತೆ ಕೇಂದ್ರ ಸರ್ಕಾರ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯನ್ನು ಕೋರಲಾಗಿದೆ.

ಅಡಿಕೆ ಕ್ಯಾನ್ಸರ್ ಕಾರಕವಲ್ಲ ಎಂಬ ವಿಷಯದ ಬಗ್ಗೆ ಅಂಕುರ್ ಗುಟ್ಕ V/s Indian Asthma Care Society and others ಸಂಬಂಧಿತ Special leave Petition No. 016308/2007 ನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದೆ. ಈ ಪ್ರಕರಣವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ನಡೆಸಲಾಗುತ್ತಿದ್ದು ಪ್ರಸ್ತುತ ಸರ್ವೋಚ್ಚ ನ್ಯಾಯಾಲಯದ ಹಂತದಲ್ಲಿ ಬಾಕಿ ಇರುತ್ತದೆ.

ಮುಂದುವರೆದು, ಅಡಿಕೆ ಔಷಧೀಯ ಗುಣಗಳ ಬಗ್ಗೆ ದಾಖಲೆ ಆಧಾರದಲ್ಲಿ ತಿಳಿಸಲು ತೋಟಗಾರಿಕೆ ಇಲಾಖೆ ವತಿಯಿಂದ ಎಂ.ಎಸ್. ರಾಮಯ್ಯ ವಿಶ್ವವಿದ್ಯಾಲಯ ಬೆಂಗಳೂರು ಸಂಸ್ಥೆಯಲ್ಲಿ ಸಂಶೋಧನೆಯನ್ನು ಕೈಗೊಳ್ಳಲಾಗುತ್ತಿದೆ. ಎಂ.ಎಸ್.ರಾಮಯ್ಯ ವಿಶ್ವ ವಿದ್ಯಾಲಯರವರು ನೀಡಿರುವ ಮಧ್ಯಂತರ ವರದಿಯಲ್ಲಿ ಅಡಿಕೆಯು ಕ್ಯಾನ್ಸರ್ ಕಾರಕವಲ್ಲ ಎಂಬ ವಿಷಯದ ಬಗ್ಗೆ ವರದಿ ನೀಡಲಾಗಿದೆ. ಅಡಿಕೆಯನ್ನು ತಂಬಾಕು ಅಥವಾ ಪಾನ ಮಸಾಲಗಳೊಂದಿಗೆ ಬಳಸದೆ ಇದ್ದಲ್ಲಿ ಹಾಗೂ ಮಿತ ಹಿತ ಪ್ರಮಾಣದಲ್ಲಿ ಸೇವನೆ ಮಾಡಿದಲ್ಲಿ ಅಪಾಯಕಾರಿವಲ್ಲವೆಂಬುದು ವರದಿಯಾಗಿದೆ. ಅಡಿಕೆ ಕ್ಯಾನ್ಸರ್ ಕಾರಕವಲ್ಲ ಎಂಬ ವಿಷಯದ ಬಗ್ಗೆ ತೋಟಗಾರಿಕೆ ಇಲಾಖೆ ವತಿಯಿಂದ ಎಂ.ಎಸ್.ರಾಮಯ್ಯ ವಿಶ್ವ ವಿದ್ಯಾಲಯದಲ್ಲಿ ರೂ.31.80 ಲಕ್ಷಗಳ ಅನುದಾನದಿಂದ ಸಂಶೋಧನೆ ಕೈಗೊಳ್ಳಲಾಗುತ್ತಿದೆ. ಮಧ್ಯಂತರ ವರದಿ ಸಲ್ಲಿಕೆಯಾಗಿದ್ದು ಅಂತಿಮ ವರದಿ ಪಡೆದು ಅದರ ಆಧಾರದ ಮೇಲೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಈ ಕುರಿತು ತಂಡವನ್ನು ರಚಿಸಿ ಸುಪ್ರೀಂ ಕೋರ್ಟ್‌ಗೆ ಅಫಿಡೆವಿಟ್ ಸಲ್ಲಿಸುವ ಸಂಬಂಧ ತೀರ್ಮಾನ ತೆಗೆದುಕೊಳ್ಳಲಾಗುವುದು.

HORTI 594 HGM 2024

(ಎಸ್.ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು